ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

"ಆತ್ಮ ನಿರ್ಭರ ಭಾರತ ಅಭಿಯಾನ"ದ ಅಡಿಯಲ್ಲಿ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪುನಶ್ಚೇತನ

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) –

368 (326) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳೆಷ್ಟು; ಈ ವರ್ಗದ ಕೈಗಾರಿಕೆಗಳ ಬಗ್ಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳು ಇತ್ತೀಚೆಗೆ ನಡೆಸಿರುವ ಸಮೀಕ್ಷೆ/ಗಣತಿ ಪ್ರಕಾರ ಈ ವಲಯದಲ್ಲಿ ಒದಗಿಸಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಕೋವಿಡ್ ಸೋಂಕು-19 ಹರಡುವಿಕೆ ಹಿನ್ನೆಲೆಯಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಧಿಸಿದ ನಿಯಮಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಬಾಧಿತವಾದ ಒಟ್ಟು ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳ ಸಂಖ್ಯೆ ಎಷ್ಟು; ಈ ಬಗ್ಗೆ ರಾಜ್ಯ ಸರ್ಕಾರ ಅಧಿಕೃತವಾಗಿ ಸಮೀಕ್ಷೆ ನಡೆಸಿದೆಯೇ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ"ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ, ವ್ಯಾಪಾರ-ವಹಿವಾಟು, ಸಾಲ, ಸರ್ಕಾರದಿಂದ ಶೇರು ತುಂಬುವುದು ಮತ್ತು ಸಾಲ ಖಾತ್ರಿ ಆರ್ಥಿಕ ನೆರವು ಅಡಿಯಲ್ಲಿ ರಾಜ್ಯಕ್ಕೆ ದೊರೆತಿರುವ ಆರ್ಥಿಕ ನೆರವು ಎಷ್ಟು; ಆರ್ಥಿಕ ನೆರವನ್ನು ಯಾವ ಯಾವ ಇಲಾಖೆಯ ಮುಖೇನ ಕೈಗಾರಿಕೆಗಳಿಗೆ ಒದಗಿಸಲಾಗಿದೆ?